ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಕಾನೂನು ಕಾಲೇಜುಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

484 (536) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಸರ್ಕಾರಿ/ಅನುದಾನಿತ/ಅನುದಾನ ರಹಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಸರ್ಕಾರಿ ಅನುದಾನಿತ ಕಾಲೇಜುಗಳಲ್ಲಿ ಯಾವ ಯಾವ ಮೂಲ ಸೌಕರ್ಯಗಳ ಹಾಗೂ ಸಿಬ್ಬಂದಿಗಳ ಕೊರತೆ ಇದೆ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಈ ಕೊರತೆಗಳನ್ನು ನೀಗಿಸುವ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸದರಿ ಕಾಲೇಜುಗಳ ಬೋಧಕ ಸಿಬ್ಬಂದಿಗಳಿಗೆ ಯು. ಜಿ. ಸಿ. ವೇತನವನ್ನು ನೀಡಲಾಗುತ್ತಿದೆಯೇ?